ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1372
ಸದಸ್ಯರ ಹೆಸರು	:	ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	23.09.2021.
ಉತ್ತರಿಸುವ ಸಚಿವರು	:	ಗೃಹ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ವಾಹನ ಸವಾರರನ್ನು ಇದ್ದಕ್ಕಿದ್ದ ಹಾಗೆ ತಡೆದು ನಿಲ್ಲಿಸಿ ಪೊಲೀಸರು ತಪಾಸಣೆ ಮಾಡಬಾರದು, ಸಂಚಾರಿ ಅಪರಾಧ ಮಾಡಿದಾಗ ಮಾತ್ರ ನಿಲ್ಲಿಸಿ ದಾಖಲೆಗಳನ್ನು ಪರಿಶೀಲಿಸಬೇಕೆಂದು ಬೆಂಗಳೂರು ಪೊಲೀಸ್ ಆಯುಕ್ತರ ಸುತ್ತೋಲೆ ಇರುವುದು ನಿಜವಲ್ಲವೆ ;	ಹೌದು.
(ಆ)	ಪೊಲೀಸ್ ಅಧಿಕಾರಿಗಳು (ಸಂಚಾರಿ ಪೊಲೀಸರು) ವಾಹನ ಸವಾರರನ್ನು ತಡೆದು ದಾಖಲೆಗಳನ್ನು ತಪಾಸಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ; ಪತ್ರಿಕೆಗಳಲ್ಲಿ, ವಿದ್ಯುನ್ಮಾನ ವಾಹಿನಿಗಳಲ್ಲಿ ಈ ಬಗ್ಗೆ ಬಂದಿರುವ ವರದಿಗಳನ್ನು ಗಮನಿಸಿಲ್ಲವೆ ;	ಗಮನಿಸಿದೆ.
(ಇ)	ಬೆಂಗಳೂರು ನಗರದಲ್ಲಿ ಸರ್ಕಾರದ ಸುತ್ತೋಲೆಯನ್ನು ಉಲ್ಲಂಘಿಸಿ ತಪಾಸಣೆ ಮಾಡುತ್ತಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಂಡಿದ್ದೀರಿ ; ಎಷ್ಟು ಪೊಲೀಸರಿಗೆ ನೋಟೀಸ್ ಕೊಟ್ಟಿದ್ದೀರಿ ? (ವಿವರ ನೀಡುವುದು)	ಸುತ್ತೋಲೆಯಲ್ಲಿನ ಸೂಚನೆಗಳನ್ನು ಉಲ್ಲಂಘಿಸಿದ ಒಟ್ಟು 29 ಸಂಚಾರ ಅಧಿಕಾರಿಗಳು/ಸಿಬ್ಬಂದಿಗಳ ವಿರುದ್ಧ ಕೆ.ಸಿ.ಎಸ್(ಡಿಪಿ) ನಿಯಮ 7ರ ಅಡಿಯಲ್ಲಿ ದೋಷಾರೋಪಣಾ ಪತ್ರ ನೀಡಿ ಶಿಸ್ತು ಕ್ರಮವನ್ನು ಜರುಗಿಸಲಾಗಿದೆ.

ಹೆಚ್‌ಡಿ 108 ಎಸ್‌ಎಸ್‌ಟಿ 2021

(ಆರಗ ಜ್ಞಾನೇಂದ್ರ)
ಗೃಹ ಸಚಿವರು